ಇ) ರಾಜ್ಯ ಸರ್ಕಾರದ ಆಯವ್ಯಯದ ಜೊತೆಗೆ ಕೇಂದ್ರ ಸರ್ಕಾರದ ಧನಸಹಾಯ ಪಡೆದು ಆಸ್ಪತ್ರೆಯ ಸಮಗ್ರ ಅಭಿವೃದ್ಧಿ ಕಾರ್ಯಕ್ರಮ ಪರಿಶೀಲನೆಯಲ್ಲಿದೆ.

ಈ) ಪರಿಶೀಲನೆಯಲ್ಲಿದೆ.

ಬೆಂಗಳೂರಿನ ಗಾಂಧಿನಗರದಲ್ಲಿರುವ ಸರ್ಕಾರಿ ಆಯುರ್ವೇದ ಆಸ್ಪತ್ರೆ ಜಮೀನಿನ ಒತ್ತುವರಿ

954 (1172) ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಗಾಂಧಿನಗರದಲ್ಲಿರುವ ಸರ್ಕಾರಿ ಆಯುರ್ವೇದ ಆಸ್ಪತ್ರೆ ಔಷಧಿವನಕ್ಕಾಗಿ ಮೀಸಲಾಗಿರಿಸಿದ್ದ ಜಮೀನನ್ನು ಖಾಸಗಿಯವರು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಔಷಧಿ ವನಕ್ಕಾಗಿ ಮೀಸಲಾಗಿರಿಸಿದ್ದ ಜಮೀನು ಎಷ್ಟು? ಅದರಲ್ಲಿ ಒತ್ತುವರಿಯಾಗಿರುವ ಸ್ಥಳವೆಷ್ಟು?

ಇ) ಈ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕಾಲಮಿತಿಯನ್ನು ನಿಗದಿಪಡಿಸುವುದೆ? ಹಾಗಿದ್ದಲ್ಲಿ ಎಷ್ಟು ದಿನಗಳೊಳಗೆ ಈ ಒತ್ತುವರಿಯನ್ನು ತೆರವುಗೊಳಿಸಲಾಗುವುದು?

ಈ) ಈ ಔಷಧಿ ವನವನ್ನು ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆಯನ್ನು ಸಿದ್ಧಪಡಿಸಿ ಜಾರಿಗೊಳಿಸುವುದೆ?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಒತ್ತುವರಿಯಾಗಿರುವುದಿಲ್ಲ.

ಆ) ಎರಡು ಎಕರೆ - ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಔಷಧಿ ವನವನ್ನು ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರದ ವತಿಯಂದ ಪ್ರತಿ ವರ್ಷವು 10,000-00 ರೂ.ಗಳನ್ನು ವೆಚ್ಚ ಮಾಡಲಾಗುತ್ತಿದೆ. ಕೇಂದ್ರ ಪುರಸ್ಕೃತ ಯೋಜನೆಯಡಿ ರೂ.5.00 ಲಕ್ಷಗಳ ಅನುದಾನವನ್ನು ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಅಥಣಿ ತಾಲ್ಲೂಕಿನ ಮಹಾರಾಷ್ಟ್ರ ಗಡಿ ಭಾಗದ ಹಳ್ಳಿಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ

955 (1144) ಶ್ರೀ ಡೊಂಗರಗಾಂವ ಶಹಜಹಾನ್ ಇಸ್ಮಾಯಿಲ್ (ಅಥಣಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನ ಜನರು ಮೂಲಭೂತ ಸೌಲಭ್ಯದಿಂದ ವಂಚಿತರಾಗಿದ್ದು ಮಹಾರಾಷ್ಟ್ರ ಗಡಿಭಾಗದ ಹಳ್ಳಿಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಯಾವ ಕ್ರಮ ಕೈಗೊಂಡಿದೆ;

2. ಬಳ್ಳಿಗೇರಿ ಮತ್ತು ಸಂಬರಗಿ ಗ್ರಾಮಗಳಲ್ಲಿ ಆರೋಗ್ಯ ಕೇಂದ್ರದ ಬೇಡಿಕೆ ಇದ್ದು, ಹಾಗೂ ಐಗಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಅಥಣಿ ತಾಲ್ಲೂಕಿನ ಗ್ರಾಮಾಂತರ ಜನಸಂಖ್ಯೆ 420447 ಇದ್ದು ಮಾರ್ಗಸೂಚಿಯ ಪ್ರಕಾರ 14 ಪ್ರಾಥಮಿಕ ಆರೋಗ್ಯ ಕೇಂದ್ರವಿರುವ ಅವಶ್ಯಕತೆ ಇರುತ್ತದೆ. ಆದರೆ ಈಗ ಈ